12

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ 2013-14 ನೇ ಸಾಲಿನಲ್ಲಿ ಎರಡನೇ ತ್ರೈಮಾಸಿಕ ಯೋಜನೇತರ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ.

1. ದಿನಾಂಕ: 12-07-2013 ರ ಪರಿಷ್ಕೃತ ಆಯವ್ಯಯ.
2. ಸರ್ಕಾರಿ ಆದೇಶ ಸಂಖ್ಯೆ: ಕೃಇ 22 ಕೃವಿಬೆ 2013, ದಿನಾಂಕ: 17-05-2013.
3. ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು ರವರ ದಿನಾಂಕ: 17-7-2013 ರ ಪತ್ರ ಸಂಖ್ಯೆ: ಹನಿಅ/ವಿಭಾಗ/3/ಸಿ5-1/2013-14.

ಪ್ರಸ್ತಾವನೆ:

2013-14 ನೇ ಸಾಲಿನ ಆಯವ್ಯಯದಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ ಯೋಜನೇತರ ಅನುದಾನ 10000.00ಲಕ್ಷಗಳನ್ನು ನಿಗದಿಪಡಿಸಿದ್ದು ಅದರಂತೆ ಮೇಲೆ (2)ರಲ್ಲಿ ಓದಲಾದ ದಿನಾಂಕ: 17-05-2013 ರ ಆದೇಶದಲ್ಲಿ ಯೋಜನೇತರ ವೆಚ್ಚವಾಗಿ ರೂ. 2500.00 (ಎರಡು ಸಾವಿರದ ಐದು ನೂರು ಲಕ್ಷ ರೂಪಾಯಿ ಮಾತ್ರ) ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ದಿನಾಂಕ: 12-07-2013 ರಂದು ಮೇಲೆ ಓದಲಾದ (1) ರಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ ಯೋಜನೇತರ ಅನುದಾನವನ್ನು ಪರಿಷ್ಕರಿಸಿ ಯೋಜನೇತರ ಅನುದಾನವಾಗಿ ರೂ. 11711.00 ಲಕ್ಷಗಳನ್ನು ನಿಗದಿಪಡಿಸಿದೆ.

ಮೇಲೆ ಓದಲಾದ (3) ರ ದಿನಾಂಕ: 17-07-2013 ರ ಪತ್ರದಲ್ಲಿ 2013-14ನೇ ಸಾಲಿನ ಆಯವ್ಯಯದಲ್ಲಿ ಯೋಜನೇತರ ಅನುದಾನ ಲೆಕ್ಕ ಶೀರ್ಷಿಕೆ 2415-80-004-1-01 ಸಹಾಯಾನುದಾನ 101ರಡಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ ರೂ.10000.00 ಲಕ್ಷಗಳನ್ನು ನಿಗಧಿಗೊಳಿಸಲಾಗಿದ್ದು, ಸದರಿ ಅನುದಾನದಲ್ಲಿ ಮೊದಲನೇ ತ್ರೈಮಾಸಿಕ ಅನುದಾನವಾಗಿ ಏಪ್ರಿಲ್ 2013 ರಿಂದ ಜೂನ್ 2013 ರವರೆಗೆ ರೂ.2500.00 ಲಕ್ಷಗಳನ್ನು (ಎರಡು ಸಾವಿರದ ಐದು ನೂರು ಲಕ್ಷ ರೂಪಾಯಿಗಳು ಮಾತ್ರ) ದಿನಾಂಕ: 17-05-2013 ರಂದು ಬಿಡುಗಡೆ ಮಾಡಲಾಗಿದೆ.

ಸರ್ಕಾರವು ಜುಲೈ 2013 ರಲ್ಲಿ 2013-14ನೇ ಸಾಲಿಗೆ ಪರಿಷ್ಕೃತ ಆಯವ್ಯಯದಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ ಯೋಜನೇತರ ಅನುದಾನವಾಗಿ ರೂ. 11711.00 ಲಕ್ಷಗಳನ್ನು ನಿಗದಿಪಡಿಸಿದೆ. ಅದರಂತೆ ಜುಲೈ 2013 ರಿಂದ ಸೆಪ್ಟೆಂಬರ್ 2013 ರವರೆಗೆ ಬೋಧಕ ಮತ್ತು ಬೋಧಕೇತರ ವೇತನ, ಗುತ್ತಿಗೆದಾರರ ವೇತನ ಮತ್ತು ಇನ್ನಿತರ ಭತ್ಯೆಗಳನ್ನು ಭರಿಸಲು ಎರಡನೇ ತ್ರೈಮಾಸಿಕ ಅನುದಾನವಾಗಿ ರೂ.2927.75 ಲಕ್ಷಗಳನ್ನು (ಎರಡು ಸಾವಿರದ ಒಂಬೈನೂರಾ ಇಪ್ಪತ್ತೇಳು ಲಕ್ಷದ ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಹಾಗೂ ಜುಲೈ 2013 ರಲ್ಲಿ ನಿಗದಿ ಪಡಿಸಿರುವ ಆಯವ್ಯಯದಂತೆ ಮೊದಲನೇ ತ್ರೈಮಾಸಿಕ ಅನುದಾನದ ಬಾಕಿ 427.75 ಲಕ್ಷಗಳು ಒಟ್ಟು ರೂ. 3355.50 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಹಣಕಾಸು ನಿಯಂತ್ರಣಾಧಿಕಾರಿಗಳು, ಬೆಂಗಳೂರು ಕೃಷಿ ವಿಶ್ವವಿದ್ಯಾಲಯ ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕೃಇ 22 ಕೃವಿಬೆ 2013, ಬೆಂಗಳೂರು ದಿನಾಂಕ: 07-08-2013**

ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು 2013-14 ನೇ ಸಾಲಿಗೆ ಸಂಬಂಧಿಸಿದಂತೆ ಯೋಜನೇತರ ಲೆಕ್ಕ ಶೀರ್ಷಿಕೆ 2415-80-004-1-01 ರಡಿ (ಸಹಾಯಾನುದಾನ 101) ಒದಗಿಸಲಾಗಿರುವ ರೂ.11711.00 ಲಕ್ಷಗಳ

...2

ಪೈಕಿ ರೂ.2927.75 ಗಳನ್ನು ಹಾಗೂ ಜುಲೈ 2013 ರಲ್ಲಿ ನಿಗದಿ ಪಡಿಸಿರುವ ಆಯವ್ಯಯದಂತೆ ಮೊದಲನೇ ತ್ರೈಮಾಸಿಕ ಅನುದಾನದ ಬಾಕಿ 427.75 ಲಕ್ಷಗಳು ಒಟ್ಟು ರೂ. 3355.50 ಲಕ್ಷಗಳನ್ನು (ಮೂರು ಸಾವಿರದ ಮೂರು ನೂರಾ ಐವತ್ತೈದು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ) ಎರಡನೇ ತ್ರೈಮಾಸಿಕ ಅನುದಾನವಾಗಿ ವೇತನ ಮತ್ತು ಇತರೆ ಭತ್ಯೆಗಳನ್ನು ಭರಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

- ಪ್ರತಿ ತ್ರೈಮಾಸಿಕ ಅನುದಾನವನ್ನು ಆಯಾ ತ್ರೈಮಾಸಿಕದ ಬಳಿಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು;
- ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು;
- ಸರ್ಕಾರವು ನೀಡಿದ ಸೂಚನೆ ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು;
- ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು;
- ಬಿಡುಗಡೆ ಮಾಡಲಾಗಿರುವ ಅನುದಾನವು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ;
- ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು;

2) ಬಿಡುಗಡೆಯಾಗಿರುವ ಅನುದಾನಕ್ಕೆ ಕೃಷಿ ವಿಶ್ವವಿದ್ಯಾಲಯದ ಹಣಕಾಸು ನಿಯಂತ್ರಣಾಧಿಕಾರಿಗಳು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು ಸರ್ಕಾರದ ಅಧಿನ ಕಾರ್ಯದರ್ಶಿ (ಕೃಷಿ), ಕೃಷಿ ಇಲಾಖೆ ಇವರಿಗೆ ನೀಡಲಾಗಿದೆ.

3) ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್ ಡಿ 1 ಟಿಎಫ್‌ಪಿ 2013, ದಿನಾಂಕ: 10-5-2013ರಲ್ಲಿ ಆಡಳಿತಾತ್ಮಕ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರ ಮತ್ತು ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರು ದಿನಾಂಕ: 03-08-2013ರ ಟಿಪ್ಪಣಿ ಸಂಖ್ಯೆ: ಕೃಇ 141 ಆಂಆಸ 2013 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

9/8

(ಜೆ.ಆರ್.ವಿಶ್ವನಾಥಾಚಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

...3

2. ಕುಲಪತಿಗಳು/ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು.
3. ರಾಜ್ಯ ಹುಜೂರು ಖಜಾನಾಧಿಕಾರಿಗಳು, ಬೆಂಗಳೂರು.
4. ಸರ್ಕಾರಿ ಲೆಕ್ಕ ಪರಿಶೋದಕರು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದಶಿಗಳು, ಆರ್ಥಿಕ ಇಲಾಖೆ (ವೆಚ್ಚ-2 ಮತ್ತು 4) ವಿಧಾನಸೌಧ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
7. ಶಾಖಾ ರಕ್ಷಾಕಡತ/ ಹೆಚ್ಚುವರಿ ಪ್ರತಿಗಳು.